# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಡಾ: ತಾಳವಾರ್ ಸಾಬಣ್ಣ(ನಾಮ ನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1009 |
| ಉತ್ತರಿಸಬೇಕಾದ ದಿನಾಂಕ | 20.08.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಹತ್ತಿರ ಕೊಳಗೇರಿ ಪ್ರದೇಶದ ಬಡವರಿಗಾಗಿ ರೂ.58 ಕೋಟಿ ವೆಚ್ಚದಲ್ಲಿ 1000 ಮನೆಗಳು ನಿರ್ಮಾಣವಾಗಿ ಎರಡು ವರ್ಷ ಕಳೆದರೂ ಇನ್ನೂ ಹಂಚಿಕೆ ಮಾಡದಿರಲು ಕಾರಣಗಳೇನು; | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಪ್ರದೇಶದಲ್ಲಿ ರೂ. 55.78 ಕೋಟಿಗಳ ಯೋಜನಾ ವೆಚ್ಚದಲ್ಲಿ 1000 (ಜಿ+1) ಮನೆಗಳ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ. ಫಲಾನುಭವಿಗಳಿಗೆ ಈಗಾಗಲೇ ತಾತ್ಕಾಲಿಕ ಹಂಚಿಕೆ ಪತ್ರಗಳನ್ನು ವಿತರಿಸಲಾಗಿರುತ್ತದೆ. |
| (ಆ) | 7-8 ವರ್ಷಗಳ ಹಿಂದೆ ರೂ.50-75 ಸಾವಿರ ವಂತಿಗೆ ಹಣ ಕಟ್ಟಿದ ದಲಿತ ಮತ್ತು ಹಿಂದುಳಿದ ಕುಟುಂಬಗಳು ಕಾಯುತ್ತಿರುವುದಕ್ಕೆ ಪರಿಹಾರ ನೀಡಲಾಗುವುದೇ; | ಸದರಿ ಯೋಜನೆಯ ಮಾರ್ಗಸೂಚಿಯನುಸಾರ ಈ ಯೋಜನೆಯಡಿ ಮನೆಯ ಘಟಕ ವೆಚ್ಚವು ರೂ.5.56 ಲಕ್ಷಗಳಾಗಿದ್ದು, ಪ್ರತಿ ಮನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ ರೂ. 3.50 ಲಕ್ಷಗಳಾಗಿರುತ್ತದೆ. ಘಟಕ ವೆಚ್ಚದ ಶೇ. 10 ರಿಂದ 15 ರಷ್ಟು ಅಂದರೆ 55,600/- ರಿಂದ ರೂ.83,400/- ಗಳನ್ನು ಫಲಾನುಭವಿ ವಂತಿಕೆಯಾಗಿ ಫಲಾನುಭವಿಗಳಿಂದ ಭರಿಸಲಾಗಿರುತ್ತದೆ.<br><br>ಪ್ರಸ್ತುತ ಸದರಿ 1000 (ಜಿ+1) ಮನೆಗಳ ನಿರ್ಮಾಣ ಪೂರ್ಣಗೊಂಡಿರುತ್ತದೆ. ಬಡಾವಣೆಗೆ ಮೂಲಭೂತ ಸೌಲಭ್ಯಗಳಾದ ಸಿ.ಸಿ ರಸ್ತೆ, ಚರಂಡಿ, ಒಳಚರಂಡಿ ಮತ್ತು ವಿದ್ಯುದ್ದೀಕರಣ ಕಾಮಗಾರಿ STP(Sewage Treatment plant) ಮತ್ತು ನೀರಿನ ಸೌಲಭ್ಯ ಒದಗಿಸಲು ದಿನಾಂಕ:28.08.2024ರಂದು ಸರ್ಕಾರದಿಂದ ಅನುಮೋದನೆ ದೊರಕಿರುತ್ತದೆ. ಅದರಂತೆ, ನಿಯಮಗಳನ್ವಯ ಟೆಂಡರ್ ಕರೆದು ಕಾಮಗಾರಿಗಳು ಪ್ರಗತಿಯಲಿರುತ್ತದೆ. |

| | | |
|---|---|---|
| (ಇ) | 1000 ಮನೆಗಳು ನಿರ್ಮಾಣವಾಗಿದ್ದರೂ ಅದಕ್ಕೆ ಬೇಕಾದ ಮೂಲಭೂತ ಸೌಕರ್ಯ ಆಮೆಗತಿಯಲ್ಲಿ ನಡೆಯುತ್ತಿರುವುದರಿಂದ ಮನೆಗಳು ಈಗಾಗಲೇ ಬಿರುಕು ಬಿಟ್ಟಿದ್ದು, ಮಧ್ಯಪಾನ/ಜೂಜಾಟ ಮುಂತಾದ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದರು ಸರ್ಕಾರ ಮನೆಗಳನ್ನು ಹಂಚಿಕೆ ಮಾಡದಿರಲು ಕಾರಣವೇನು; | ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಪ್ರದೇಶದಲ್ಲಿ 1000 (ಜಿ+1) ಮನೆಗಳ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, ಪ್ರಸ್ತುತ ಸಿ.ಸಿ ರಸ್ತೆ, ಚರಂಡಿ, ಒಳಚರಂಡಿ ಮತ್ತು ವಿದ್ಯುದ್ದೀಕರಣ ಕಾಮಗಾರಿಗಳು ಪೂರ್ಣಗೊಂಡಿದ್ದು, STP(Sewage Treatment plant) ಮತ್ತು ನೀರಿನ ಸೌಲಭ್ಯ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಮೂಲಭೂತ ಸೌಲಭ್ಯ ಕಾಮಗಾರಿಗೆ ಅನುದಾನದ ಅವಶ್ಯಕತೆ ಇರುವುದರಿಂದ ಅನುದಾನ ಬಿಡುಗಡೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. ಅದರಂತೆ ಅನುದಾವನ್ನು ಒದಗಿಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಿ ಮನೆಗಳನ್ನು ಯೋಗ್ಯ ರೀತಿಯಲ್ಲಿ ವಾಸಕ್ಕೆ ನೀಡಲಾಗುವುದು.<br><br>ಸದರಿ ಮನೆಗಳು ಉತ್ತಮ ಸ್ಥಿತಿಯಲ್ಲಿದ್ದು, ಕಾಲಕಾಲಕ್ಕೆ ಮಂಡಳಿಯ ಅಧಿಕಾರಿಗಳಿಂದ ಪರಿವೀಕ್ಷಣೆ ಕೈಗೊಂಡಿದ್ದು, ಜೂಜಾಟ ಮುಂತಾದ ಅನೈತಿಕ ಚುಟುವಟಿಕೆಗಳು ಹಾಗೂ ಮನೆಗಳಿಗೆ ಹಾನಿ ಉಂಟಾಗಿರುವ ಬಗ್ಗೆ ಪರಿವೀಕ್ಷಣೆ ಸಮಯದಲ್ಲಿ ಕಂಡು ಬಂದಿರುವುದಿಲ್ಲವೆಂದು ಸಂಬಂಧಪಟ್ಟ ಅಧಿಕಾರಿಗಳು ವರದಿಸಿರುತ್ತಾರೆ. |
| (ಈ) | ಚುನಾವಣೆ ಹತ್ತಿರ ಬಂದಾಗ ಸ್ಥಳೀಯ ಜನಪ್ರತಿನಿಧಿಗಳು 1000 ಮನೆಗಳನ್ನು ಕಟ್ಟಿದ್ದೇವೆ ಎಂದು ರಾಜಕೀಯಕ್ಕಾಗಿ ಬಳಸಿಕೊಂಡು ಬಡವರಿಗೆ ಮೋಸ ಮಾಡುತ್ತಿರುವುದು ಸರಿಯೇ; | ಮೂಲಭೂತ ಸೌಲಭ್ಯ ಕಾಮಗಾರಿಗಳು ಪೂರ್ಣಗೊಂಡ ನಂತರ, ಅನುಮೋದಿತ ಫಲಾನುಭವಿಗಳಿಗೆ ಶೀಘ್ರವಾಗಿ ಮನೆಗಳನ್ನು ಮಂಡಳಿಯ ನಿಯಮಗಳನ್ವಯ ಹಂಚಿಕೆ ಮಾಡಲಾಗುವುದು. |

ಸಂಖ್ಯೆ: ವಇ 158 ಹೆಚ್ಎಫ್ಎ 2025]

B. [signature]

(ಬಿ.ಝೆಡ್. ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.